# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ. ಕೆಂಪೇಗೌಡನಗರ ಉಪವಿಭಾಗ
ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)ಪಿ.ಆರ್/ 59. /2021-22. ದಿನಾಂಕ : 31-05-21

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ: ಬಿ12(5)ಪಿ.ಆರ್/35/2020-21. ದಿನಾಂಕ:29-09-2020 ಹಾಗೂ ನೋಡಲ್ ಅಧಿಕಾರಿ ರವರು ದಿನಾಂಕ: 12-05-2021 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143 ರ ವಾರ್ಡ್ ಕಛೇರಿಯಲ್ಲಿ ವಾರ್ಡ್ ಸಮಿತಿ ಸಭೆ ಮತ್ತು WDC ಸಭೆಯನ್ನು ಏರ್ಪಡಿಸಲಾಗಿ. ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

ಉಪಸ್ಥಿತರು:

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ವೆಂಕಟೇಶ್ ಆರ್ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು 143 | 9480684415 |
| 3 | ಶ್ರೀ. ಎಸ್.ಹೇಮಂತಕುಮಾರ್ | ಸಹಾಯಕ ಅಭಿಯಂತರರು (ವಿ) | 9449870535 |
| 4 | ಸಿ. ಗೋವಿಂದರಾಜುಲು | ಕಂದಾಯ ವಸೂಲಿಗಾರರು | 9900691698 |
| 5 | ಡಾ!! ಸ್ವಾತಿ ಟಿ.ಎನ್. | ಮೆಡಿಕಲ್ ಆಫೀಸರ್ | 9740808051 |
| 6 | ಪಿ.ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು | 9449153115 |
| 7 | ಸುಬ್ರಮಣಿ.ಬಿ.ಸಿ | Marshal | 9066997278 |
| 8 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |

ದಿನಾಂಕ:-12-05-2021 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆ ಮತ್ತು WDC ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸಲಾಯಿತು.

Scanned by CamScanner

ಮೊದಲು ನೋಡಲ್ ಅಧಿಕಾರಿಗಳು ಮಾತನಾಡಿ ಕೋವಿಡ್-19 ಪ್ರಯುಕ್ತ ಲಾಕ್‌ಡೌನ್ ಜಾರಿಯಾಗಿರುವ ಹಿನ್ನೆಲೆಯಲ್ಲಿ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಅಧ್ಯಕ್ಷರು ಹಾಗೂ ಎಂ.ಎಂ.ಪಿ. ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಅಧ್ಯಕ್ಷರು ಸಂಚಾರಿ ದೂರವಾಣಿ ಮುಖಾಂತರ ಮಾತನಾಡಿ ಈ ದಿನದ ಸಭೆಗೆ ಬರಲು ಆಗುವುದಿಲ್ಲವೆಂದು ತಿಳಿಸಿರುವುದನ್ನು ಸಭೆಯ ಗಮನಕ್ಕೆ ತಂದರು.

ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ಓ.ವಿ.ಜಯಕುಮಾರ್ ರವರು ಸಭೆಗೆ ಹಾಜರಾಗಿದ್ದು, ಸದರಿಯವರೊಂದಿಗೆ ವಾರ್ಡಿನ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

ನಂತರ ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ಓ.ವಿ.ಜಯಕುಮಾರ್ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ 18 ವರ್ಷದಿಂದ 45 ವರ್ಷದವರೆಗಿನ ನಾಗರೀಕರಿಗೆ ವ್ಯಾಕ್ಸಿನ್ ಹಾಕುವ ವಿಚಾರವಾಗಿ ಪ್ರಸ್ತಾಪಿಸಿ ಯಾವಾಗ ಮತ್ತು ಎಲ್ಲಿ ವ್ಯವಸ್ಥೆ ಮಾಡುತ್ತೀರೆಂದು ತಿಳಿಸಲು ಸಭೆಯ ಗಮನಕ್ಕೆ ತಂದರು. ಆಗ ಸಭೆಯಲ್ಲಿ ಹಾಜರಿದ್ದ ವಾರ್ಡಿನ ವೈದ್ಯಾಧಿಕಾರಿಯಾದ ಡಾ॥.ಸ್ವಾತಿ ರವರು ಮಾತನಾಡಿ ಸರ್ಕಾರದ ಮಾರ್ಗ ಸೂಚಿಗಳಂತೆ ಲಸಿಕೆ ನೀಡುವ ಕಾರ್ಯವನ್ನು ಹಮ್ಮಿಕೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

ನಂತರ ಡಾ॥.ಸ್ವಾತಿ ರವರು ಮಾತನಾಡಿ ಬಿಬಿಎಂಪಿ ವ್ಯಾಪ್ತಿಯಲ್ಲಿ ಪ್ರತಿ ವಾರ್ಡ್‌ಗಳಲ್ಲಿಯೂ ಕೋವಿಡ್ ಸೋಂಕಿತರ ಚಿಕಿತ್ಸೆಗಾಗಿ "Triage" ಸೆಂಟರ್‌ಗಳನ್ನು ಸ್ಥಾಪಿಸಲು ಮಾನ್ಯ ಆಯುಕ್ತರು ಆದೇಶಿಸಿದ್ದು ವಾರ್ಡ್ ಸಂಖ್ಯೆ: 143 ರ ವ್ಯಾಪ್ತಿಯ ಪೊಬ್ಬತ್ತಿ ಹೆರಿಗೆ ಆಸ್ಪತ್ರೆಯಲ್ಲಿ ಸಿದ್ಧತೆ ಮಾಡಿಕೊಳ್ಳುವ ಕೆಲಸವು ನಡೆಯುತ್ತಿರುವುದಾಗಿ ಸಭೆಗೆ ತಿಳಿಸಿದರು.

ನಂತರ ನೋಡಲ್ ಅಧಿಕಾರಿಗಳು ಮಾತನಾಡಿ "Ward Deter committee" (WDC) ಯಲ್ಲಿ ಹಾಲಿ ವಾರ್ಡ್ ಕಮಿಟಿಯಲ್ಲಿ ಇರುವಂತಹ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಪ್ರತಿನಿಧಿಗಳನ್ನು ಸದಸ್ಯರನ್ನಾಗಿ ನೇಮಿಸಿಕೊಳ್ಳಲು ಸೂಚಿಸಿರುವ ಹಿನ್ನೆಲೆಯಲ್ಲಿ ಸದರಿ ವೆಲ್‌ಫೇರ್ ಅಸೋಸಿಯೇಷನ್‌ಗಳ ಸದಸ್ಯರುಗಳನ್ನೂ WDC ಕಮಿಟಿಯಲ್ಲಿ ಸದಸ್ಯರನ್ನಾಗಿ ನೇಮಿಸಿಕೊಳ್ಳಲಾಗಿರುತ್ತದೆ ಎಂಬ ಅಂಶವನ್ನು ಸಭೆಗೆ ತಿಳಿಸಿದರು ಹಾಗೂ ಇದಕ್ಕೆ ಸದಸ್ಯರುಗಳ ಸಹಕಾರವನ್ನು ಕೋರಿದರು.

ನೋಡಲ್ ಅಧಿಕಾರಿಗಳು ಪುನಃ ಮಾತನಾಡಿ ಮುಂದೆ ನಡೆಸಲಾಗುವ WDC ಕಮಿಟಿಯ ಸಭೆಗಳ ದಿನಾಂಕವನ್ನು WDC "Whatsapp Group"ನಲ್ಲಿ ತಿಳಿಸಲಾಗುವುದು ಮತ್ತು ಅದರಂತೆ ತಾವುಗಳು WDC ಸಭೆಗೆ ಹಜರಾಗಿ ಕೋವಿಡ್ -19 ಗೆ ಸಂಬಂಧಿಸಿದಂತೆ ತಮ್ಮ ಸಲಹೆ ಸೂಚನೆ ನೀಡುವುದರ ಜೊತೆಗೆ ಈ ಬಗ್ಗೆ ಕೈಗೊಳ್ಳಲಾಗುವ ಕಾರ್ಯಕ್ರಮಗಳಲ್ಲಿ ತಮ್ಮ ಸಂಪೂರ್ಣ ಸಹಕಾರ ನೀಡಬೇಕೆಂದು ಕೋರಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(signature) 31/5/2021.
ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ -143 ವಿ. ವಿ.ಪುರಂ

(signature) 31/5/2021
ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)

Scanned by CamScanner